ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 27-07-2016

## ಪತ್ರಿಕಾ ಪ್ರಕಟಣೆ

## ಕರ್ನಾಟಕ ಚಲನಚಿತ್ರ ಅಕಾಡೆಮಿಯಿಂದ ಜುಲೈ 28 ರಿಂದ ಚೆನ್ನೈನಲ್ಲಿ ಕನ್ನಡ ಚಲನಚಿತ್ರೋತ್ಸವ

ಬೆಂಗಳೂರು, ಜುಲೈ 27 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯಿಂದ ಕನ್ನಡ ಚಲನಚಿತ್ರೋತ್ಸವವನ್ನು ಜುಲೈ 28 ರಿಂದ 31 ರವರೆಗೆ ಚೆನ್ನೈನ ಅಲುವಾರ್ ಪೇಟ್‌ನ ಕಸ್ತೂರಿ ರಂಗ ರಸ್ತೆಯಲ್ಲಿರುವ ರಷ್ಯನ್ ಸೆಂಟರ್ ಆಫ್ ಸೈನ್ಸ್ ಅಂಡ್ ಕಲ್ಚರ್ ನಲ್ಲಿ ಏರ್ಪಡಿಸಲಾಗಿದೆ ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್.ಬಿ. ದಿನೇಶ್ ತಿಳಿಸಿದ್ದಾರೆ.

ಚಲನಚಿತ್ರೋತ್ಸವ ಉದ್ಘಾಟನಾ ಸಮಾರಂಭವು ಜುಲೈ 28 ರಂದು ಸಂಜೆ 5-30 ಗಂಟೆಗೆ ನಡೆಯಲಿದೆ. ಭಾರತೀಯ ಚಲನಚಿತ್ರ ರಂಗದ ಹಿರಿಯ ಕಲಾವಿದೆ ಪದ್ಮಭೂಷಣ ಡಾ: ಬಿ. ಸರೋಜಾ ದೇವಿ ಉದ್ಘಾಟಿಸುವರು. ಖ್ಯಾತ ಕಲಾವಿದೆ ಶ್ರೀಮತಿ ಸುಹಾಸಿನಿ ಮಣಿರತ್ನಂ ಆಶಯ ನುಡಿಗಳನ್ನಾಡುವರು.

ಮುಖ್ಯ ಅತಿಥಿಗಳಾಗಿ ದಕ್ಷಿಣ ಭಾರತ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಹೆಚ್.ಡಿ. ಗಂಗರಾಜು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕ ಎನ್.ಆರ್. ವಿಶುಕುಮಾರ್, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸಾ.ರಾ ಗೋವಿಂದು, ಇಂಡಿಯನ್ ಸಿನಿ ಅಪ್ರಿಸಿಯೇಷನ್ ಫೌಂಡೇಷನ್ ಅಧ್ಯಕ್ಷ ಎಸ್. ಕಣ್ಣನ್, ಚೈನ್ನೈ ಚಲನಚಿತ್ರ ಕಲಾವಿದರ ಸಂಘದ ಅಧ್ಯಕ್ಷ ನಾಜರ್, ಖ್ಯಾತ ಚಲನಚಿತ್ರ ನಟರಾದ ಯಶ್, ಕಾರ್ತೀಕ್, ಚೈನ್ನೈ ಚಲನಚಿತ್ರ ನಿರ್ಮಾಪಕ ಸಂಘದ ಅಧ್ಯಕ್ಷ ಎಸ್. ತನು, ಚಲನಚಿತ್ರ ನಿರ್ದೇಶಕರ ಸಂಘದ ಅಧ್ಯಕ್ಷ ವಿಕ್ರಮನ್, ಭಾರತೀಯ ಚಲನಚಿತ್ರ ಒಕ್ಕೂಟದ ಅಧ್ಯಕ್ಷ ಸಿ. ಕಲ್ಯಾಣ್, ಮಾಜಿ ಅಧ್ಯಕ್ಷ ರವಿ ಕೊಟ್ಟಾರ್ಕರ್ ಹಾಗೂ ಚೈನ್ನೈ ಕರ್ನಾಟಕ ಸಂಘದ ಅಧ್ಯಕ್ಷ ನಾರಾಯಣ್ ಭಟ್

ಪಾಲ್ಗೊಳ್ಳುವರು.  ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಎಸ್.ವಿ. ರಾಜೇಂದ್ರಸಿಂಗ್ ಬಾಬು ಅವರು ಅಧ್ಯಕ್ಷತೆ ವಹಿಸುವರು.

ಉದ್ಘಾಟನಾ ಸಮಾರಂಭದ ಅಂಗವಾಗಿ ಕೇಂದ್ರ ಸರ್ಕಾರದ ಶ್ರೇಷ್ಠ ಪ್ರಾದೇಶಿಕ ಕನ್ನಡ ಚಿತ್ರ ಪ್ರಶಸ್ತಿ ಪುರಸ್ಕೃತಿ ತಿಥಿ ಚಿತ್ರವನ್ನು ಏರ್ಪಡಿಸಲಾಗಿದೆ.  ಚಿತ್ರೋತ್ಸವದ ಅಂಗವಾಗಿ ಜುಲೈ 29 ರಿಂದ 31 ರವರೆಗೆ ಅರಿವು, ರಂಗಿತರಂಗ, ಯೂ ಟರ್ನ್, ಮಾರಿಕೊಂಡವರು, ಇಷ್ಟಕಾಮ್ಯ,  1 ನೇ ರ್‍ಯಾಂಕ್ ರಾಜು, ಗೋಧಿ ಮೈಬಣ್ಣ ಸಾಧಾರಣ ಮೈಕಟ್ಟು, ಕರ್ವ ಹಾಗೂ ಮಿ. ಅಂಡ್ ಮಿಸೆಸ್ ರಾಮಾಚಾರಿ ಚಿತ್ರಗಳು ಪ್ರದರ್ಶಿತಗೊಳ್ಳಲಿವೆ ಎಂದು ಅವರು ತಿಳಿಸಿದ್ದಾರೆ.

ಬಾಬು/ಕೆಎಂ

## ಕೃಷಿ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 27 (ಕರ್ನಾಟಕ ವಾರ್ತೆ)

ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯವು ರಾಜ್ಯ ಮಟ್ಟದ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ (ತನ್ನ ಆಡಳಿತದ ವ್ಯಾಪ್ತಿಯಲ್ಲಿ ಬರುವ 10 ಜಿಲ್ಲೆಗಳ) ಆಸಕ್ತ ರೈತ ಹಾಗೂ ರೈತ ಮಹಿಳೆಯರಿಂದ ಕೃಷಿ ಪ್ರಶಸ್ತಿಗಳಿಗಾಗಿ ಅರ್ಜಿಯನ್ನು ಆಹ್ವಾನಿಸಿದೆ.

ರಾಜ್ಯದ ಮಟ್ಟದಲ್ಲಿ ದಿವಂಗತ ಸಿ. ಭೈರೇಗೌಡ ರಾಜ್ಯ ಮಟ್ಟದ ರೈತ ಪ್ರಶಸ್ತಿ,  ದಿವಂಗತ ಡಾ. ಎಂ.ಹೆಚ್. ಮರಿಗೌಡ ರಾಜ್ಯ ಮಟ್ಟದ ಅತ್ಯುತ್ತಮ ತೋಟಗಾರಿಕಾ ರೈ ಪ್ರಶಸ್ತಿ, ದಿವಂಗತ ಡಾ.  ಆರ್. ದ್ವಾರಕೀನಾಥ್ ಅತ್ಯುತ್ತಮ ರೈತ ಪ್ರಶಸ್ತಿ,  ಹಾಗೂ ಆರ್. ದ್ವಾರಕೀನಾಥ್ ಅತ್ಯುತ್ತಮ ವಿಸ್ತರಣಾ ಕಾರ್ಯಕರ್ತ ಪ್ರಶಸ್ತಿ ಹಾಗೂ ಕೆನರಾ ಬ್ಯಾಂಕ್ ಪ್ರಾಯೋಜಿತ ಕ್ಯಾನ್ ಬ್ಯಾಂಕ್ ಅತ್ಯುತ್ತಮ ರೈತ ಹಾಗೂ ರೈತ ಮಹಿಳೆ ಪ್ರಶಸ್ತಿಗಳನ್ನು ನೀಡಲಾಗುವುದು

ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಮಟ್ಟದ ಅತ್ಯುತ್ತಮ ರೈತ ಪ್ರಶಸ್ತಿ, ಜಿಲ್ಲಾ ಮಟ್ಟದ ಅತ್ಯುತ್ತಮ ರೈತ ಮಹಿಳೆ ಪ್ರಶಸ್ತಿಗಳನ್ನು ನೀಡಲಾಗುವುದು.

ತಾಲ್ಲೂಕು ಮಟ್ಟದಲ್ಲಿ ಅತ್ಯುತ್ತಮ ಯುವ ರೈತ ಪ್ರಶಸ್ತಿ, ತಾಲ್ಲೂಕು ಮಟ್ಟದ ಅತ್ಯುತ್ತಮ ಯುವ ರೈತ ಮಹಿಳೆ ಪ್ರಶಸ್ತಿಗಳನ್ನು ನೀಡಲಾಗುವುದು.

ಮೇಲಿನ ಪ್ರಶಸ್ತಿಗಳನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯವು ನವೆಂಬರ್ – 2016 ರ ಸಂದರ್ಭದಲ್ಲಿ ನೀಡಲಾಗುತ್ತದೆ. ನಿಗದಿತ ಅರ್ಜಿ ನಮೂನೆಯು ಆಯಾ ಜಿಲ್ಲೆಗಳ ಜಂಟಿ ಕೃಷಿ

ನಿರ್ದೇಶಕರವರ ಕಚೇರಿ, ವಿಸ್ತರಣಾ ನಿರ್ದೇಶಕರ ಕಚೇರಿ, ಹೆಬ್ಬಾಳ, ಬೆಂಗಳೂರು, ಕೃಷಿ ವಿಜ್ಞಾನ ಕೇಂದ್ರಗಳು (ಹಾಡೋನಹಳ್ಳಿ-ದೊಡ್ಡಬಳ್ಳಾಪುರ, ಚಂದುರಾಯನಹಳ್ಳಿ-ಮಾಗಡಿ, ಕಂದಲಿ-ಹಾಸನ, ಕೊನೇಹಳ್ಳಿ-ತಿಪಟೂರು, ವಿ.ಸಿ. ಫಾರಂ-ಮಂಡ್ಯ, ಕುರುಬೂರು ಫಾರಂ-ಚಿಂತಾಮಣಿ ಮತ್ತು ಹರದನಹಳ್ಳಿ-ಚಾಮರಾಜನಗರ) ವಿಸ್ತರಣಾ ಶಿಕ್ಷಣ ಘಟಕ (ನಾಗನಹಳ್ಳಿ-ಮೈಸೂರು) ದಲ್ಲಿ ದೊರೆಯುತ್ತದೆ.

ಅರ್ಜಿ ನಮೂನೆಯು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲೂ (**www.uasbangalore.edu.in**) ಲಭ್ಯವಿರುತ್ತದೆ.

ಭರ್ತಿಮಾಡಿದ ಅರ್ಜಿಯನ್ನು ಸಲ್ಲಿಸಲು ಅಕ್ಟೋಬರ್ 8 ರಂದು ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ವಿವರಗಳಿಗೆ ವಿಸ್ತರಣಾ ನಿರ್ದೇಶಕರ ಕಚೇರಿ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು – 560 024 ಇವರನ್ನು ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ – 080 – 23418883.

ಬಾಬು:ಜಿಪಿಆರ್.

# 'ಮೊಬೈಲ್ ಫೋನ್ ದುರಸ್ತಿ' ತರಬೇತಿ ಶಿಬಿರ ಜು.29ಕ್ಕೆ ಮುಂದೂಡಿಕೆ

ಬೆಂಗಳೂರು, ಜುಲೈ 27 (ಕರ್ನಾಟಕ ವಾರ್ತೆ)

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಯುವಕ ಯುವತಿಯರಿಗಾಗಿ ಸ್ವಯಂ ಉದ್ಯೋಗ ಒದಗಿಸಿಕೊಡುವ ನಿಟ್ಟಿನಲ್ಲಿ ಹಮ್ಮಿಕೊಂಡಿದ್ದ 'ಮೊಬೈಲ್ ಫೋನ್ ದುರಸ್ತಿ' ತರಬೇತಿ ಶಿಬಿರವನ್ನು ಸಾರಿಗೆ ಮುಷ್ಕರದ ಹಿನ್ನೆಲೆಯಲ್ಲಿ ಜುಲೈ 29, 2016 ಕ್ಕೆ ಮುಂದೂಡಲಾಗಿದೆ.

ಜುಲೈ 28, 2016 ರಿಂದ ಆಗಸ್ಟ್ 9, 2016 ರವರೆಗೆ ನಡಯಬೇಕಿದ್ದ ತರಬೇತಿ ಶಿಬಿರ ಸಾರಿಗೆ ಮುಷ್ಕರದ ಹಿನ್ನೆಲೆಯಲ್ಲಿ ಜುಲೈ 29, 2016 ರಿಂದ ಆಗಸ್ಟ್ 10, 2016 ರವರೆಗೆ ನಡೆಯಲಿದೆ ಎಂದು ಯುವಜನ ಹಾಗೂ ಕ್ರೀಡಾ ಇಲಾಖೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಂಗಳೂರು ದಕ್ಷಿಣ ಜಿಲ್ಲೆ ಕುಂಬಳಗೋಡುವಿನ ಯುವಜನ ತರಬೇತಿ ಕೇಂದ್ರದಲ್ಲಿ 13 ದಿನಗಳ ಕಾಲ ಬೆಳಗ್ಗೆ 10.00 ಗಂಟೆಯಿಂದ ಸಂಜೆ 5-00 ಗಂಟೆವರೆಗೆ ತರಬೇತಿ ನಡೆಯಲಿದ್ದು, ತರಬೇತಿ ಶಿಬಿರದಲ್ಲಿ ಭಾಗವಹಿಸುವ ಯುವಕ-ಯುವತಿಯರಿಗೆ ಲಘು ಉಪಹಾರ ಒದಗಿಸಲಾಗುವುದು.

ಕನಿಷ್ಠ ಎಸ್.ಎಸ್.ಎಲ್.ಸಿ. (ಪಾಸ್/ಫೇಲ್) ಆದ 18 ರಿಂದ 35 ವರ್ಷದೊಳಗಿನ ಅಭ್ಯರ್ಥಿಗಳು ರೂ. 100/- ನೋಂದಣಿ ಶುಲ್ಕ ಪಾವತಿಸಿ, ಜನ್ಮ ದಿನಾಂಕದ ದಾಖಲೆಯೊಂದಿಗೆ (ಎಸ್.ಎಸ್.ಎಲ್.ಸಿ. ಅಂಕಪಟ್ಟಿ) ರಾಜ್ಯ ಯುವಕೇಂದ್ರ, ನೃಪತುಂಗಾ ರಸ್ತೆ, ಬೆಂಗಳೂರು- 560 001 ಅಥವಾ ಯುವಜನ ತರಬೇತಿ ಕೇಂದ್ರ, ಕುಂಬಳಗೋಡು, ಬೆಂಗಳೂರು ದಕ್ಷಿಣ ಜಿಲ್ಲೆ, ಇಲ್ಲಿ ನೋಂದಾಯಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 080-22214911, ಮೊಬೈಲ್ ಸಂಖ್ಯೆ 9880839295, 8453516171 ಕಚೇರಿ ವೇಳೆಯಲ್ಲಿ ಸಂಪರ್ಕಿಸುವುದು.

ಮಮತ/ಜಿಪಿಆರ್